ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕುಶಾಲನಗರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ತಾತ್ಕಾಲಿಕ) ಗೆ ಸರ್ಕಾರದ ಅನುಮೋದನೆ ನೀಡುವ ಬಗ್ಗೆ

ಓದಲಾಗಿದೆ: 1) ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 483 ಮೈಅಪ್ರಾ 2006, ದಿನಾಂಕ: 18.02.2008

2) ಸದಸ್ಯ ಕಾರ್ಯದರ್ಶಿಗಳು, ಕುಶಾಲನಗರ ಯೋಜನಾ ಪ್ರಾಧಿಕಾರ, ಕುಶಾಲನಗರ ಇವರ ಪತ್ರ ಸಂಖ್ಯೆ:ಕುಯೋಪ್ರಾ:ಸಕಾ:ಮಯೋತಾ:2013–14/522, ದಿನಾಂಕ: 11.03.2014

3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಇವರ ಏಕ ಕಡತ ಸಂಖ್ಯೆ: ನಗ್ರಾಯೋನಿ/ಉ.ನಿ(ಯೋವಿ)/ಮಯೋ/ ಕುಶಾಲನಗರ/2014–15, ದಿನಾಂಕ:

ಕುಶಾಲನಗರ ಯೋಜನಾ ಪ್ರದೇಶ ಪ್ರಾಧಿಕಾರ ಪತ್ರ ಸಂಖ್ಯೆ: 343 ದಿ: 16/12/2014 ಕುಶಾಲನಗರ

16/12/14

*****

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಕುಶಾಲನಗರ ಪಟ್ಟಣಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ನು ವಿಸ್ತರಿಸಿ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸಿರುತ್ತದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 9(1) ರನ್ವಯ ಕುಶಾಲನಗರ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆ (ತಾತ್ಕಾಲಿಕ) ನ್ನು ಸಿದ್ಧಪಡಿಸಿ ಸರ್ಕಾರದ ಅನುಮೋದನೆಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತದೆ.

ಮೇಲೆ ಓದಲಾದ (3)ರ ಕುಶಾಲನಗರ ಪಟ್ಟಣದ ಜನಸಂಖ್ಯೆಯು 2001 ರಲ್ಲಿ 15,486 ಇದ್ದು 30 ವರ್ಷಗಳ ಯೋಜನಾ ಅವಧಿಗೆ ಅಂದರೆ 2031 ನೇ ಇಸವಿಗೆ ಜನಸಂಖ್ಯೆಯು ಸುಮಾರು 32,000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 1105 ಹೆಕ್ಟೇರ್ ವಿಸ್ತೀರ್ಣದಲ್ಲಿ 920.60 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ (12) ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 1105 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 479.79 ಹೆಕ್ಟೇರ್ (ಶೇ.52.12), ವಾಣಿಜ್ಯಕ್ಕಾಗಿ 50.75 ಹೆಕ್ಟೇರ್ (ಶೇ.5.51), ಕೈಗಾರಿಕೆಗಾಗಿ 99.84 ಹೆಕ್ಟೇರ್ (ಶೇ.10.85), ಸಾರ್ವಜನಿಕ:ಅರೆ ಸಾರ್ವಜನಿಕ ಉಪಯೋಗಕ್ಕೆ 52.14 ಹೆಕ್ಟೇರ್ (ಶೇ. 5.66), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 108.52 ಹೆಕ್ಟೇರ್ (ಶೇ. 11.79) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 125.84 ಹೆಕ್ಟೇರ್ (ಶೇ. 13.67), ನಾಗರೀಕ ಸೌಲಭ್ಯಕ್ಕಾಗಿ 3.72 ಹೆಕ್ಟೇರ್ (ಶೇ. 0.40) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13 (1) ರನ್ವಯ ತಾತ್ಕಾಲಿಕ ಅನುಮೋದನೆ ನೀಡಲು

...2

ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 469 ಮೈಅಪ್ರಾ 2014, ದಿನಾಂಕ: 03.12.2014

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕುಶಾಲನಗರ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ರಾಜೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಸದರಿ ಅಧಿಸೂಚನೆಯನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ ಪ್ರಕಟಿತ ಅಧಿಸೂಚನೆಯ 150 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸುವಂತೆ ಕೋರಲಾಗಿದೆ.

ಪ್ರತಿಗಳು:

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಮೈಸೂರು ಇವರಿಗೆ ಮಾಹಿತಿಗಾಗಿ.
3) ಸದಸ್ಯ ಕಾರ್ಯದರ್ಶಿಗಳು, ಯೋಜನಾ ಪ್ರಾಧಿಕಾರ, ಕುಶಾಲನಗರ.
4) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಮಡಿಕೇರಿ ಇವರಿಗೆ ಮಾಹಿತಿಗಾಗಿ.
5) ಶಾಖಾ ರಕ್ಷಾ ಕಡತ ; ಹೆಚ್ಚುವರಿ ಪ್ರತಿಗಳು.

ಕುಶಾಲನಗರ ಯೋಜನಾ ಪ್ರಾಧಿಕಾರ, ಕುಶಾಲನಗರ.

ಕಾವೇರಿ ಬಡಾವಣೆ, ನಿ.ಸಂ.05, ಬ್ಲಾಕ್ ನಂ.01, ಕುಶಾಲನಗರ – 571 234

Email Id: kushalnagaradtp@hotmail.com ದೂರವಾಣಿ ಸಂ: 08276–274040

ಸಂ:ನಅಪ್ರಾಮ/ಮಹಾ.ಯೋ.ಅನು/2014–15 ದಿನಾಂಕ:12.01.2015.

ಕುಶಾಲನಗರ ಯೋಜನಾ ಪ್ರಾಧಿಕಾರ ದಿನಾಂಕ 20/01/2015 ಕುಶಾಲನಗರ

ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆ.

ವಿಷಯ:–ಕುಶಾಲನಗರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರವು ತಾತ್ಕಾಲಿಕ ಅನುಮೋದನೆ ನಿಡಿದ್ದು, ಇದನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿಕೆ.

ಉಲ್ಲೇಖ:–ಸರ್ಕಾರದ ಆದೇಶ ಸಂಖ್ಯೆ: ನಅಇ/469/ಮೈಅಪ್ರಾ/2014, ದಿನಾಂಕ:03.12.2014.

20/01/15

* * * * *

ವಿಷಯಕ್ಕೆ ಸಂಬಂಧಿಸಿದಂತೆ, ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(1)ರನ್ವಯ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ನಅಇ/469/ಮೈಅಪ್ರಾ/2014, ದಿನಾಂಕ:03.12.2014ರಲ್ಲಿ ಕುಶಾಲನಗರ ಯೋಜನಾ ಪ್ರಾಧಿಕಾರವು ಕುಶಾಲನಗರ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶ ಮಾಡಿರುತ್ತದೆ.

ಸರ್ಕಾರವು ಅನುಮೋದಿಸಿರುವ ಕುಶಾಲನಗರದ ಮಹಾಯೋಜನೆ (ತಾತ್ಕಾಲಿಕ)–2031ಕ್ಕೆ ಸಂಬಂಧಪಟ್ಟಿರುವ ನಕ್ಷೆಗಳನ್ನು ವರದಿ ಮತ್ತು ವಲಯ ನಿಯಾಮಾವಳಿಗಳ ಪ್ರತಿಗಳ ಒಂದು ಪ್ರತಿಯನ್ನು ಕುಶಾಲನಗರ ಯೋಜನಾ ಪ್ರಾಧಿಕಾರ ಕಚೇರಿ 'ಹಾಗೂ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು ಇವರ ಕಚೇರಿಯಲ್ಲಿ ಇಡಲಾಗಿದೆ. ಆದ್ದರಿಂದ 60 ದಿನಗಳ ಕಾಲಾವಕಾಶವನ್ನು ನೀಡಿ ಸಾರ್ವಜನಿಕರಿಂದ ಆಕ್ಷೇಪಣೆ/ಸಲಹೆ ಸೂಚನೆಗಳನ್ನು ಆಹ್ವಾನಿಸಲಾಗಿದ್ದು, ಯಾವುದೇ ಆಕ್ಷೇಪಣೆ/ಸಲಹೆ ಸೂಚನೆಗಳಿದ್ದಲ್ಲಿ ನಿಗಧಿತ ನಮೂನೆಯಲ್ಲಿ ಲಿಖಿತ ರೂಪದಲ್ಲಿ (ಕಚೇರಿ ವೇಳೆಯಲ್ಲಿ) ಮುದ್ರಾಂ ಅಥವಾ ನೊಂದಾಯಿತ ಅಂಚೆ ಮೂಲಕ ಈ ಅಧಿಸೂಚನೆ ಪ್ರಕಟಣೆಗೊಂಡ 60 ದಿನಗಳೊಳಗೆ ಸದಸ್ಯ ಕಾರ್ಯದರ್ಶಿಗಳು, ಕುಶಾಲನಗರ ಯೋಜನಾ ಪ್ರಾಧಿಕಾರ ಇವರಿಗೆ ಸಲ್ಲಿಸಬಹುದಾಗಿರುತ್ತದೆ. ಅವಧಿಯ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಈ ಮೂಲಕ ಸಾರ್ವಜನಿಕರಲ್ಲಿ ವಿನಂತಿಸಲಾಗಿದೆ.

ಪಿ.ಡಿ. 04 ಬಿ. ಪ್ರ. (50)

ಸದಸ್ಯ ಕಾರ್ಯದರ್ಶಿ 12/01/15
ಕುಶಾಲನಗರ ಯೋಜನಾ ಪ್ರಾಧಿಕಾರ
ಕುಶಾಲನಗರ